ಈ) ರಾಜ್ಯದ 61 ಹೋಬಳಿ ಕೇಂದ್ರಗಳಲ್ಲಿ ಪಶುಚಿಕಿತ್ಸಾ ಸೌಲಭ್ಯ ಗಳಿರುವುದಿಲ್ಲ.

ಕುಣಿಗಲ್ ಕಾಲೇಜಿಗೆ ಶಿಕ್ಷಕರು ಹಾಗೂ ಭೋದಕರನ್ನು ಭರ್ತಿ ಮಾಡುವ ಬಗ್ಗೆ

327 (73) ಶ್ರೀರಾಮಸ್ವಾಮಿಗೌಡ ಬಿ.ಬಿ. (ಕುಣಿಗಲ್) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಣಿಗಲ್ ಪಟ್ಟಣದ ಮಹಾತ್ಮ ಗಾಂಧಿ ಪದವಿ ಪೂರ್ವ ಕಾಲೇಜು ಹಾಗೂ ಪ್ರೌಢ ಶಾಲೆಗಳಲ್ಲಿ ಕೊರತೆ ಇರುವ ಶಿಕ್ಷಕರ / ಬೋಧಕರ ಸಂಖ್ಯೆ ಎಷ್ಟು;

ಆ) ಕೊರತೆಯಿಂದ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು) :

ಅ) ಕುಣಿಗಲ್ ಪಟ್ಟಣದ ಮಹಾತ್ಮ ಗಾಂಧಿ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರೌಢಶಾಲಾ ವಿಭಾಗದಲ್ಲಿ ಕೊರತೆ ಇರುವ

ಶಿಕ್ಷಕರ ಸಂಖ್ಯೆ : 10.

ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಒಟ್ಟು 22 ಉಪನ್ಯಾಸಕರ ಹುದ್ದೆ ಮಂಜೂರಾಗಿದ್ದು 13 ಉಪನ್ಯಾಸಕರ ಹುದ್ದೆಗಳು ಭರ್ತಿಯಾಗಿರುತ್ತದೆ.

ಕನ್ನಡ, ಇಂಗ್ಲೀಷ್, ಉರ್ದು, ಅರ್ಥಶಾಸ್ತ್ರ, ವಾಣಿಜ್ಯ, ಸಮಾಜಶಾಸ್ತ್ರ, ತಲಾ 01 ರಂತೆ 06 ಹುದ್ದೆಗಳು ಮತ್ತು ಇತಿಹಾಸ – 03 ಹುದ್ದೆಗಳು ಸೇರಿ ಒಟ್ಟು 09 ಹುದ್ದೆಗಳು ಖಾಲಿ ಇರುತ್ತವೆ.

ಆ) **ಪ್ರೌಢಶಾಲೆ** :

ಖಾಲಿ ಇರುವ ಬೋಧಕ ಹುದ್ದೆಗಳಿಗೆ ಈಗಾಗಲೇ ಹತ್ತಿರದ ಶಾಲೆಗಳಿಂದ ಹೆಚ್ಚುವರಿ ಶಿಕ್ಷಕರನ್ನು ನಿಯೋಜಿಸಲಾಗಿದೆ ಹಾಗೂ ಅತಿಥಿ ಶಿಕ್ಷಕರನ್ನು ನೇಮಿಸಿಕೊಳ್ಳಲಾಗಿದೆ. ಶಾಲಾ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಯಾವುದೇ ಧಕ್ಕೆಯಾಗದಂತೆ ಕ್ರಮ ತೆಗೆದುಕೊಳ್ಳಲಾಗಿದೆ.

ಖಾಲಿ ಇರುವ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ತುಂಬಲು ಪ್ರೌಢಾಶಾಲಾ ಶಿಕ್ಷಕರ ಅಂತಿಮ ಆಯ್ಕೆ ಪಟ್ಟಿಯನ್ನು

ಪ್ರಕಟಿಸಲಾಗಿದ್ದು, 2010ರ ಏಪ್ರಿಲ್ ಮಾಹೆಯಲ್ಲಿ ಕೌನ್ಸಿಲಿಂಗ್ ಮೂಲಕ ಸದರಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು.

ಪದವಿ ಪೂರ್ವ ಕಾಲೇಜು :

ಸರ್ಕಾರಿ ಆದೇಶ ಸಂಖ್ಯೆ : ಇಡಿ 88 ಟಿಪಿಯು 2009, ದಿ:16–06–2009ರ ಪ್ರಕಾರ ಖಾಲಿ ಇರುವ ಉಪನ್ಯಾಸಕರ 09 ಹುದ್ದೆಗಳಿಗೆ 2009–10ನೇ ಸಾಲಿನಲ್ಲಿ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಲಾಗಿದೆ.

ಹುಲಿಯೂರು ದುರ್ಗ ಹೋಬಳಿಗೆ ಪದವಿ ಪೂರ್ವ ಕಾಲೇಜಿನ ಸ್ಥಾಪನೆ

328 (74) ಶ್ರೀ ರಾಮಸ್ವಾಮಿಗೌಡ ಬಿ.ಬಿ (ಕುಣಿಗಲ್) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಣಿಗಲ್ ತಾಲ್ಲೂಕು, ಹುಲಿಯೂರು ದುರ್ಗ ಹೋಬಳಿ ಕೇಂದ್ರಕ್ಕೆ ಅತೀ ತುರ್ತಾಗಿ ಒಂದು ಪದವಿ ಕಾಲೇಜು ಬೇಡಿಕೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಮಂಜೂರು ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಇ) ಬಾರದಿದ್ದಲ್ಲಿ, ಹೋಬಳಿ ಕೇಂದ್ರದ ಸುತ್ತಮುತ್ತಲಿನ ಪದವಿ ಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಒಂದು ಪದವಿ ಕಾಲೇಜನ್ನು ಸರ್ಕಾರ ಮಂಜೂರು ಮಾಡುವುದೇ?

ಶ್ರೀ ಅರವಿಂದ ಲಿಂಬಾವಳಿ (ಉನ್ನತ ಶಿಕ್ಷಣ ಸಚಿವರು) :

ಅ) ಬಂದಿದೆ.

ಆ) ಹಣಕಾಸಿನ ಅಗತ್ಯತೆ ಹಾಗೂ ಲಭ್ಯತೆಯನ್ನಾಧರಿಸಿ ಮುಂದಿನ ಸಾಲುಗಳಲ್ಲಿ ಕಾಲೇಜು ಸ್ಥಾಪನೆ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಇ) ಉದ್ಭವಿಸುವುದಿಲ್ಲ.